# ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ಇವರ ಶೂನ್ಯವೇಳೆಯ ಪ್ರಸ್ತಾವನೆಗೆ ಉತ್ತರಿಸುವ ಬಗ್ಗೆ.

## ವಿಷಯ

ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಸತಿ ನಿಲಯಗಳಲ್ಲಿ ಸೂಕ್ತ ಸಿಬ್ಬಂದಿ ಮತ್ತು ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿದ್ದು, ಕೂಡಲೇ ತಹಶಿಲ್ದಾರ್, ಉಪ ವಿಭಾಗಾಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ ಕ್ರಮ ಕೈಗೊಳ್ಳುವ ಬಗ್ಗೆ.

## ಉತ್ತರ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1906 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. ಈ ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆಗಾಗಿ 2408 ಹುದ್ದೆಗಳು ಮಂಜೂರಾಗಿದ್ದು, ಅದರಲ್ಲಿ 1807 ಹುದ್ದೆಗಳು ಭರ್ತಿಯಾಗಿರುತ್ತವೆ. ಪ್ರಸ್ತುತ 601 ಹುದ್ದೆಗಳು ಖಾಲಿ ಇರುತ್ತವೆ.

ಖಾಲಿ ಇರುವ 601 ಹುದ್ದೆಗಳ ಪೈಕಿ ನೇರ ನೇಮಕಾತಿ ಕೋಟಾದಡಿ 232 ಹುದ್ದೆಗಳ ಭರ್ತಿಗೆ ಸಹಮತಿ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಉಳಿದ ಸೀನಿಯರ್ ವಾರ್ಡನ್, ವಾರ್ಡನ್, ಜುನಿಯರ್ ವಾರ್ಡನ್ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತದೆ.

ಸರ್ಕಾರದ ಆದೇಶ ಸಂಖ್ಯೆ SWD/EDU/ED4/80/2023 C-1161067 ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶಿಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಭೇಟಿ ನೀಡಿ ವರದಿ ಮಾಡುವಂತೆ ಆದೇಶಿಸಲಾಗಿರುತ್ತದೆ.

**ಸಕಇ 89 ಪಕವಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**